ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಶಿಕ್ಷಕರುಗಳ ವಿಶೇಷ ಭತ್ಯೆಗಳು

ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

944 (1073) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ : 01.08.2008ರ ನಂತರ ನೇಮಕಗೊಂಡಿರುವ ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು ಮೂಲ ವೇತನದಲ್ಲಿ ವಿಲೀನಗೊಳಿಸಲಾಗಿದೆಯೇ;

(ಆ) ಈ ವಿಷಯವಾಗಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರಕ್ಕೆ ತಿಳಿದಿದ್ದಲ್ಲಿ, ಇದನ್ನು ಜಾರಿ ಮಾಡಲು ವಿಳಂಬ ನೀತಿ ಅನುಸರಿಸುತ್ತಿರುವುದು ಏಕೆ;

(ಈ) ಪದವಿ ಪೂರ್ವ ಕಾಲೇಜುಗಳಲ್ಲಿ ಪಿ.ಹೆಚ್.ಡಿ, ಎಸ್.ಎಲ್.ಇ.ಟಿ, ಎನ್.ಇ.ಟಿ. ಪದವಿ ಹೊಂದಿರುವ ಉಪನ್ಯಾಸಕರಿಗೆ ಸರ್ಕಾರ ನೇಮಿಸಿದ ಕುಮಾರ್ ನಾಯ್ಕ್ ಸಮಿತಿ ಶಿಫಾರಸ್ಸಿನ ಪ್ರಕಾರ ಪದವಿ ಕಾಲೇಜಿಗೆ ಬಡ್ತಿ ನೀಡಲಾಗಿದೆಯೇ; ಈ ವಿಷಯವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?